**National**
**Kannada**
**10.07.2026 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು</u>

೧. ಮೂರು ರಾಷ್ಟ್ರಗಳ ಪ್ರವಾಸದ ಕೊನೆಯ ಹಂತದಲ್ಲಿ ನ್ಯೂಜಿಲೆಂಡ್‌ನ ಆಕ್ಲೆಂಡ್ ತಲುಪಿದ ಪ್ರಧಾನಿ ನರೇಂದ್ರ ಮೋದಿ

೨. ಹೆಚ್ಚಿನ ಪ್ರಮಾಣದ ಆಲ್ಕೋಹಾಲ್ ಅಂಶ ಹೊಂದಿರುವ ಔಷಧಗಳ ನಿಯಂತ್ರಣಕ್ಕೆ ಕೇಂದ್ರ ಸರ್ಕಾರದಿಂದ ನಿಯಮ ತಿದ್ದುಪಡಿ

೩. ಆಸ್ಟ್ರೇಲಿಯಾದಿಂದ ತಮಿಳುನಾಡಿನ ಅಮೂಲ್ಯ ಪ್ರಾಚೀನ ಕಲಾಕೃತಿಗಳ ಮರುಪಡೆಯುವಿಕೆಗೆ ಉಪರಾಷ್ಟ್ರಪತಿ ಹರ್ಷ

೪. ಮಹಿಳಾ ಟೆಸ್ಟ್ ಕ್ರಿಕೆಟ್; ಇಂಗ್ಲೆಂಡ್ ವಿರುದ್ಧ ಮೊದಲು ಬ್ಯಾಟಿಂಗ್ ಮಾಡುತ್ತಿರುವ ಭಾರತ

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಮೂರು ರಾಷ್ಟ್ರಗಳ ಪ್ರವಾಸದ ಕೊನೆಯ ಹಂತವಾಗಿ ಇಂದು ನ್ಯೂಜಿಲೆಂಡ್‌ನ ಆಕ್ಲೆಂಡ್ ತಲುಪಿದ್ದಾರೆ. ಆಕ್ಲೆಂಡ್ ವಿಮಾನ ನಿಲ್ದಾಣದಲ್ಲಿ ಪ್ರಧಾನಿಯವರನ್ನು ನ್ಯೂಜಿಲೆಂಡ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್ ಆತ್ಮೀಯವಾಗಿ ಬರಮಾಡಿಕೊಂಡರು. ಅಲ್ಲಿ ಅವರಿಗೆ ಭಾರತ- ನ್ಯೂಜಿಲೆಂಡ್ ಸಶಸ್ತ್ರ ಪಡೆಗಳಿಂದ ಔಪಚಾರಿಕ ಸ್ವಾಗತ ದೊರೆಯಿತು. ಈ ಪ್ರವಾಸದ ಸಮಯದಲ್ಲಿ ಉಭಯ ನಾಯಕರು ವ್ಯಾಪಾರ, ಹೂಡಿಕೆ, ಶಿಕ್ಷಣ, ತಂತ್ರಜ್ಞಾನ ಮತ್ತು ಜನರ ನಡುವಿನ ಸಂಬಂಧ ಸಹಕಾರವನ್ನು ಮತ್ತಷ್ಟು ಬಲಪಡಿಸುವ ಮಾರ್ಗಗಳ ಕುರಿತು ಚರ್ಚಿಸುವ ನಿರೀಕ್ಷೆಯಿದೆ. ಇದು ಉಭಯ ದೇಶಗಳ ನಡುವಿನ ಉತ್ತಮಗೊಳ್ಳುತ್ತಿರುವ ಪಾಲುದಾರಿಕೆಯನ್ನು ಪ್ರತಿಬಿಂಬಿಸುತ್ತದೆ. ಈ ಸಮಯದಲ್ಲಿ ಪ್ರಧಾನಿ ನರೇಂದ್ರ ಮೋದಿ, ಪ್ರಮುಖ ಉದ್ಯಮಿಗಳು ಮತ್ತು ಕ್ರೀಡಾಪಟುಗಳೊಂದಿಗೆ ಸಂವಹನ ನಡೆಸಲಿದ್ದಾರೆ. ನ್ಯೂಜಿಲೆಂಡ್ ಪ್ರವಾಸಕ್ಕೂ ಮುನ್ನ ಪ್ರಧಾನಿ, ಆಸ್ಟ್ರೇಲಿಯಾದ ಐತಿಹಾಸಿಕ, ಉನ್ನತಮಟ್ಟದ ಭೇಟಿಯನ್ನು ಅಧಿಕೃತವಾಗಿ ಮುಕ್ತಾಯಗೊಳಿಸಿದರು. ಭಾರತ, ಆಸ್ಟ್ರೇಲಿಯಾದ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಗಾಗಿ, ಎರಡು ಅತಿದೊಡ್ಡ ಪ್ರಜಾಪ್ರಭುತ್ವದ ದೇಶಗಳ ನಡುವೆ ಭವಿಷ್ಯದ ನೀಲನಕ್ಷೆ ರೂಪಗೊಂಡಿದೆ. ತಮ್ಮ ಭೇಟಿಯ ಸಮಯದಲ್ಲಿ ನೀಡಿದ ಆತ್ಮೀಯ ಆತಿಥ್ಯಕ್ಕಾಗಿ ಆಸ್ಟ್ರೇಲಿಯಾ ಸರ್ಕಾರ ಮತ್ತು ಪ್ರಜೆಗಳಿಗೆ ಹಾಗೂ ಆಸ್ಟ್ರೇಲಿಯಾ ಪ್ರಧಾನಿ ಆಂಥೋನಿ ಅಲ್ಬನೀಸ್ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಕೃತಜ್ಞತೆ ಸಲ್ಲಿಸಿದ್ದಾರೆ.

**<>><><*><><<>**

ಹೆಚ್ಚಿನ ಪ್ರಮಾಣದ ಆಲ್ಕೋಹಾಲ್ ಅಂಶ ಹೊಂದಿರುವ ಔಷಧಗಳ ಮೇಲಿನ ನಿಯಂತ್ರಣವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ಔಷಧ ನಿಯಮಗಳು-೧೯೪೫ಕ್ಕೆ ತಿದ್ದುಪಡಿ ಮಾಡಿದೆ. ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ, ಷೆಡ್ಯೂಲ್-ಕೆ ಅಡಿಯಲ್ಲಿ ನೀಡಲಾಗಿದ್ದ ಎಥೈಲ್ ಆಲ್ಕೋಹಾಲ್ ಹೊಂದಿರುವ ಔಷಧಗಳ ಪರವಾನಗಿ ವಿನಾಯಿತಿಯನ್ನು ಹಿಂಪಡೆದಿದೆ. ಪರಿಮಾಣದ ಆಧಾರದಲ್ಲಿ ಶೇಕಡಾ ೧೨ಕ್ಕಿಂತ ಹೆಚ್ಚು ಎಥೈಲ್ ಆಲ್ಕೋಹಾಲ್ ಹೊಂದಿರುವ ಹಾಗೂ ೩೦ ಮಿಲಿಲೀಟರ್‌ಗಿಂತ ಹೆಚ್ಚಿನ ಪ್ರಮಾಣದಲ್ಲಿರುವ ಔಷಧಗಳು ಇನ್ನುಮುಂದೆ ಷೆಡ್ಯೂಲ್-ಕೆ ಅಡಿಯಲ್ಲಿ ನೀಡಲಾಗುತ್ತಿದ್ದ ವಿನಾಯಿತಿಯ ವ್ಯಾಪ್ತಿಗೆ ಬರುವುದಿಲ್ಲ.ಇಂತಹ ಔಷಧಗಳ ಉತ್ಪಾದನೆ ಮತ್ತು ಮಾರಾಟಕ್ಕೆ ಇನ್ನುಮುಂದೆ ಔಷಧ ಮತ್ತು ಸೌಂದರ್ಯವರ್ಧಕಗಳ ಕಾಯ್ದೆ-೧೯೪೦ರಡಿ ಅಗತ್ಯ ಪರವಾನಗಿ ಪಡೆಯುವುದು ಕಡ್ಡಾಯವಾಗಲಿದೆ. ಈ ತಿದ್ದುಪಡಿಯಿಂದ ಆಲ್ಕೋಹಾಲ್ ಹೊಂದಿರುವ ಔಷಧಗಳ ಮೇಲಿನ ನಿಯಂತ್ರಣ ಇನ್ನಷ್ಟು ಬಲಗೊಳ್ಳಲಿದ್ದು, ಅವುಗಳನ್ನು ನಿಯಂತ್ರಿತ ಔಷಧ ಸರಬರಾಜು ವ್ಯವಸ್ಥೆಯ ಮೂಲಕವೇ ವಿತರಿಸಲಾಗುತ್ತದೆ ಎಂದು ಸಚಿವಾಲಯ ತಿಳಿಸಿದೆ. ಇದರಿಂದ ಔಷಧಗಳ ದುರುಪಯೋಗ ಮತ್ತು ಅಕ್ರಮ ಬಳಕೆಯ ಸಾಧ್ಯತೆ ಗಣನೀಯವಾಗಿ ಕಡಿಮೆಯಾಗಲಿದ್ದು, ಚಿಕಿತ್ಸಾ ಉದ್ದೇಶಗಳಿಗೆ ಅವುಗಳ ಲಭ್ಯತೆ ನಿರಂತರವಾಗಿ ಖಾತ್ರಿಯಾಗಲಿದೆ.

**<>><><*><><<>**

ಆಸ್ಟ್ರೇಲಿಯಾದಿಂದ ತಮಿಳುನಾಡಿನ ಅಮೂಲ್ಯ ಪ್ರಾಚೀನ ಕಲಾಕೃತಿಗಳನ್ನು ಯಶಸ್ವಿಯಾಗಿ ಭಾರತಕ್ಕೆ ಮರಳಿ ತರಲಾಗಿರುವ ಕುರಿತು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಸಂತಸ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ, ಈ ಪ್ರಾಚೀನ ಕಲಾಕೃತಿಗಳ ಮರುಪಡೆಯುವಿಕೆ ಭಾರತದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಮರುಸ್ಥಾಪಿಸುವ ಮತ್ತು ಸಂರಕ್ಷಿಸುವ ಮಹತ್ವದ ಮೈಲಿಗಲ್ಲಾಗಿದೆ ಎಂದು ಅವರು ತಿಳಿಸಿದ್ದಾರೆ. ೨೦೧೪ರಿಂದ ಇದುವರೆಗೆ ೬೦೦ಕ್ಕೂ ಹೆಚ್ಚು ಪ್ರಾಚೀನ ಕಲಾಕೃತಿಗಳು ಭಾರತಕ್ಕೆ ಮರಳಿರುವುದು, ಈ ಕ್ಷೇತ್ರದಲ್ಲಿ ಗಮನಾರ್ಹ ಪ್ರಗತಿಯನ್ನು ತೋರುತ್ತಿದ್ದು, 'ವಿಕಾಸ್ ಭೀ, ವಿರಾಸತ್ ಭೀ' ಎಂಬ ಧ್ಯೇಯದತ್ತ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ಉಪರಾಷ್ಟ್ರಪತಿ ತಿಳಿಸಿದ್ದಾರೆ. ಭಾರತಕ್ಕೆ ಮರಳಿರುವ ಈ ಅಮೂಲ್ಯ ಕಲಾಕೃತಿಗಳು ೧೧ ಮತ್ತು ೧೨ನೇ ಶತಮಾನಕ್ಕೆ ಸೇರಿದ್ದು, ಮೂಲತಃ ತಮಿಳುನಾಡಿನ ಐತಿಹಾಸಿಕ ದೇವಾಲಯಗಳಿಂದ ಬಂದಿವೆ. ಇವುಗಳಲ್ಲಿ ಭದ್ರಕಾಳಿ ದೇವಿಯ ಕಂಚಿನ ತ್ರಿಶೂಲ, ನಂದಿಯ ಗ್ರಾನೈಟ್ ಶಿಲ್ಪ ಹಾಗೂ ಷಣ್ಮುಖ ಕಾರ್ತಿಕೇಯನ ಬಸಾಲ್ಟ್ ಶಿಲ್ಪ ಸೇರಿವೆ.

**<>><><*><><<>**

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ಶಿಮ್ಲಾದ ಭಾರತೀಯ ಉನ್ನತ ಅಧ್ಯಯನ ಸಂಸ್ಥೆ-ಐಐಎಎಸ್ ಆಯೋಜಿಸಿದ್ದ "ವಂದೇ ಮಾತರಂ: ಎ ಜರ್ನಿ" ಶಾಶ್ವತ ಪ್ರದರ್ಶನ ಹಾಗೂ "ಸರ್ದಾರ್ ಪಟೇಲ್ ಅವರ ದೃಷ್ಟಿಕೋನ: ಏಕೀಕರಣ, ಐಕ್ಯತೆ ಮತ್ತು ಒಕ್ಕೂಟ ವ್ಯವಸ್ಥೆ" ಕುರಿತ ಅಂತಾರಾಷ್ಟ್ರೀಯ ವಿಚಾರ ಸಂಕಿರಣ ಸಮಾರಂಭವನ್ನು ವರ್ಚುವಲ್ ಮೂಲಕ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, 'ವಂದೇ ಮಾತರಂ' ಗೀತೆಯು, ಮಾತೃಭೂಮಿಯ ಮೇಲಿನ ಪ್ರೀತಿಯನ್ನು, ಪವಿತ್ರ ರಾಷ್ಟ್ರೀಯ ಕರ್ತವ್ಯವನ್ನಾಗಿ ಪರಿವರ್ತಿಸಿತು. ಅಲ್ಲದೆ, ಧೈರ್ಯ, ತ್ಯಾಗ ಮತ್ತು ಆಶಯದೊಂದಿಗೆ ಸ್ವಾತಂತ್ರ್ಯ ಹೋರಾಟಗಾರರ ಹಲವು ತಲೆಮಾರುಗಳಿಗೆ ಸ್ಫೂರ್ತಿ ನೀಡಿತು ಎಂದು

ಹೇಳಿದರು. ಸರ್ದಾರ್ ವಲ್ಲಭಭಾಯಿ ಪಟೇಲ್ ಅವರಿಗೆ ಗೌರವ ನಮನ ಸಲ್ಲಿಸಿದ ಉಪರಾಷ್ಟ್ರಪತಿ, ಒಂದು ರಾಷ್ಟ್ರ, ಒಂದು ಸಂವಿಧಾನ ಮತ್ತು ಹಂಚಿಕೆಯ ರಾಷ್ಟ್ರೀಯ ಭವಿಷ್ಯಕ್ಕೆ ಸರ್ದಾರ್ ಪಟೇಲ್ ಭದ್ರ ಬುನಾದಿ ಹಾಕಿದರು ಎಂದು ಅವರು ಹೇಳಿದರು.

<>><><*><><<>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ನಾಳೆ ಬಿಹಾರದ ಗಯಾನಗರಕ್ಕೆ ಭೇಟಿ ನೀಡಲಿದ್ದಾರೆ. ಈ ಸಂದರ್ಭದಲ್ಲಿ, ಬಿಹಾರ ಸಾರ್ವಜನಿಕ ಆಡಳಿತ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆಯಲ್ಲಿ ಆಯೋಜಿಸಲಾಗಿರುವ ಬಿಹಾರ ವಿಧಾನಸಭೆಯ ಸದಸ್ಯರ ತರಬೇತಿ ಕಾರ್ಯಕ್ರಮದ ಉದ್ಘಾಟನಾ ಅಧಿವೇಶನವನ್ನು ಅವರು ಉದ್ದೇಶಿಸಿ ಮಾತನಾಡಲಿದ್ದಾರೆ.

<>><><*><><<>

ನವದೆಹಲಿಯ ಸಂಸತ್ ಭವನದ ಸಂಕೀರ್ಣದಲ್ಲಿ ಮುಂಬರುವ ಮಳೆಗಾಲದ ಅಧಿವೇಶನದ ಸಿದ್ಧತೆಗಳನ್ನು ಸಂಸದೀಯ ವ್ಯವಹಾರಗಳ ಖಾತೆ ರಾಜ್ಯ ಸಚಿವ ಅರ್ಜುನ್ ರಾಮ್ ಮೇಘವಾಲ್ ಮತ್ತು ಸಚಿವ ಡಾ.ಎಲ್.ಮುರುಗನ್ ಇಂದು ಪರಿಶೀಲಿಸಿದರು. ಸಂಸತ್ತಿನ ಮಳೆಗಾಲದ ಅಧಿವೇಶನ, ಇದೇ ೨೦ ರಂದು ಆರಂಭಗೊಂಡು, ಆಗಸ್ಟ್ ೧೩ರವರೆಗೆ ನಡೆಯಲಿದೆ. ಮುಂಬರುವ ಅಧಿವೇಶನಕ್ಕೆ ನಿಗದಿಪಡಿಸಲಾದ ಶಾಸಕಾಂಗ ವ್ಯವಹಾರಗಳ ಸಮಗ್ರ ಪರಿಶೀಲನೆಯನ್ನು ನಡೆಸಲಾಗಿದೆ ಮತ್ತು ಅಗತ್ಯ ಮಾರ್ಗಸೂಚಿಗಳನ್ನು ನೀಡಲಾಗಿದೆ ಎಂದು ಸಚಿವ ಮೇಘವಾಲ್ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

<>><><*><><<>

ರೈಲು ಸುರಕ್ಷತೆ ಮತ್ತು ಕಾರ್ಯಾಚರಣೆಯ ದಕ್ಷತೆಯನ್ನು ಹೆಚ್ಚಿಸುವ ಉದ್ದೇಶದಿಂದ ಉತ್ತರ ರೈಲ್ವೆಯ ೬೮೦ ಕಿಲೋಮೀಟರ್ ಮಾರ್ಗದಲ್ಲಿ ‘ಕವಚ್’ ವ್ಯವಸ್ಥೆ ಅಳವಡಿಸಲು ಭಾರತೀಯ ರೈಲ್ವೆ ೨೦೬ ಕೋಟಿ ರೂಪಾಯಿ ಮಂಜೂರು ಮಾಡಿದೆ. ದಟ್ಟಣೆ ಹೆಚ್ಚಿರುವ ಹಾಗೂ ಕಾರ್ಯತಂತ್ರದ ದೃಷ್ಟಿಯಿಂದ ಮಹತ್ವದ ರೈಲು ಮಾರ್ಗಗಳಲ್ಲಿ ದೇಶೀಯವಾಗಿ ಅಭಿವೃದ್ಧಿಪಡಿಸಿರುವ ಈ ಸುರಕ್ಷತಾ ವ್ಯವಸ್ಥೆಯನ್ನು ವಿಸ್ತರಿಸುವ ಉದ್ದೇಶದಿಂದ ಈ ಯೋಜನೆಗೆ ಅನುಮೋದನೆ ನೀಡಲಾಗಿದೆ ಎಂದು ರೈಲ್ವೆ ಸಚಿವಾಲಯ ತಿಳಿಸಿದೆ. ಈ ವ್ಯವಸ್ಥೆಯು ರೈಲುಗಳ ಸಂಚಾರವನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಲಿದ್ದು, ಅಗತ್ಯವಿದ್ದಾಗ ಸ್ವಯಂಚಾಲಿತವಾಗಿ ಬ್ರೇಕ್‌ಗಳನ್ನು ಅನ್ವಯಿಸುತ್ತದೆ. ದಟ್ಟ ಮಂಜಿನಂತಹ ಪ್ರತಿಕೂಲ ಹವಾಮಾನ ಪರಿಸ್ಥಿತಿಗಳಲ್ಲಿಯೂ ವಿಶ್ವಾಸಾರ್ಹ ರೈಲು ಕಾರ್ಯಾಚರಣೆಗೆ ಇದು ನೆರವಾಗಲಿದೆ. ಇದರೊಂದಿಗೆ ಛತ್ತೀಸ್‌ಗಢದ ರಾಯ್ಪುರದಲ್ಲಿ ೨೫೦ ವಿದ್ಯುತ್ ಲೋಕೊಮೋಟಿವ್‌ಗಳಿಗೆ ಹೆಚ್ಚುವರಿ ಹೋಮಿಂಗ್ ಸೌಲಭ್ಯ ನಿರ್ಮಾಣಕ್ಕಾಗಿ ಭಾರತೀಯ ರೈಲ್ವೆ ೧೬೫ ಕೋಟಿ ರೂಪಾಯಿ ಮಂಜೂರು ಮಾಡಿದೆ. ಲೋಕೊಮೋಟಿವ್‌ಗಳ ನಿಗದಿತ ನಿರ್ವಹಣೆ, ಸುರಕ್ಷತಾ ತಪಾಸಣೆ, ದುರಸ್ತಿ ಹಾಗೂ ಸಮಗ್ರ ನಿರ್ವಹಣೆಯ ಹೊಣೆ ಹೋಮಿಂಗ್ ಶೆಡ್‌ಗೆ ಸೇರಿದ್ದು, ರೈಲುಗಳ ಸುರಕ್ಷಿತ ಮತ್ತು ಪರಿಣಾಮಕಾರಿ ಕಾರ್ಯಾಚರಣೆಯನ್ನು ಖಚಿತಪಡಿಸುವಲ್ಲಿ ಇದು ಪ್ರಮುಖ ಪಾತ್ರ ವಹಿಸುತ್ತದೆ.

<>><><*><><<>

ಆಯುಷ್ಮಾನ್ ಭಾರತ್ ಡಿಜಿಟಲ್ ಮಿಷನ್‌ನ ಪ್ರಗತಿಯನ್ನು ಪರಿಶೀಲಿಸಲು ಮಿಷನ್ ಸ್ಟೀರಿಂಗ್ ಗ್ರೂಪ್‌ನ ೩ನೇ ಸಭೆಯ ಅಧ್ಯಕ್ಷತೆಯನ್ನು ಇಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಜಗತ್ ಪ್ರಕಶ್ ನಡ್ಡಾ ವಹಿಸಿದ್ದರು. ಯೋಜನೆಯಡಿ ವಿಶ್ವದ ಅತಿದೊಡ್ಡ ಡಿಜಿಟಲ್ ಆರೋಗ್ಯ ಪರಿಸರ ವ್ಯವಸ್ಥೆಗಳಲ್ಲಿ ಒಂದಾಗಿ ಹೊರಹೊಮ್ಮಿದೆ. ಸುಮಾರು ೭೪ ಕೋಟಿ ಆಯುಷ್ಮಾನ್ ಭಾರತ್ ಆರೋಗ್ಯ ಖಾತೆಗಳನ್ನು ರಚಿಸಲಾಗಿದ್ದು, ೧೦೫ ಕೋಟಿ ಆರೋಗ್ಯ ದಾಖಲೆಗಳನ್ನು ಲಿಂಕ್ ಮಾಡಲಾಗಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು. ಇದರಡಿ ೫ ಲಕ್ಷ ೩೩ ಸಾವಿರ ಆರೋಗ್ಯ ಸೌಲಭ್ಯಗಳು ಮತ್ತು ಸುಮಾರು ೧೦ ಲಕ್ಷ ಆರೋಗ್ಯ ವೃತ್ತಿಪರರನ್ನು ರಾಷ್ಟ್ರೀಯ ಡಿಜಿಟಲ್ ಆರೋಗ್ಯ ನೋಂದಣಿಗಳಲ್ಲಿ ನೋಂದಾಯಿಸಲಾಗಿದೆ. ಡಿಜಿಟಲ್ ಆರೋಗ್ಯ ಅಳವಡಿಕೆಯನ್ನು ಹೆಚ್ಚಿಸುವುದು, ಕೃತಕಬುದ್ಧಿಮತ್ತೆ ಸೇರಿದಂತೆ ಹೊಸ ತಂತ್ರಜ್ಞಾನಗಳನ್ನು ಬಳಸಿಕೊಳ್ಳುವುದು, ಸಾಂಸ್ಥಿಕ ಸಾಮರ್ಥ್ಯಗಳನ್ನು ಬಲಪಡಿಸುವುದು ಮತ್ತು ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳೊಂದಿಗೆ ಸಹಯೋಗವನ್ನು ಉತ್ತಮಗೊಳಿಸುವತ್ತ ಗಮನಹರಿಸುವ ಯೋಜನೆಯ ಭವಿಷ್ಯದ ಮಾರ್ಗಸೂಚಿಯ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

**<>><><*><><<>**

ಲಂಡನ್ನಿನ ಐತಿಹಾಸಿಕ ಲಾರ್ಡ್ಸ್ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಮಹಿಳಾ ಟೆಸ್ಟ್ ಕ್ರಿಕೆಟ್ ಪಂದ್ಯದಲ್ಲಿ ಇಂಗ್ಲೆಂಡ್ ವಿರುದ್ಧ, ಮೊದಲು ಬ್ಯಾಟಿಂಗ್ ಮಾಡುತ್ತಿರುವ ಭಾರತ ಇತ್ತೀಚಿನ ವರದಿ ಬಂದಾಗ ೪೬ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೧೭೪ ರನ್ ಗಳಿಸಿ ಆಡುತ್ತಿದೆ.

**<>><><*><><<>**

ಸಮಗ್ರ ಗ್ರಾಮೀಣ ಅಭಿವೃದ್ಧಿಗೆ ಉತ್ತೇಜನ ನೀಡುವ ಉದ್ದೇಶದಿಂದ ಸಮನ್ವಯ ಆಧಾರಿತ ವಿಧಾನ ಅನುಸರಿಸಲು ಉದ್ದೇಶಿತ ಸಹಕಾರ ಘೋಷಣೆಗೆ ನೀತಿ ಆಯೋಗ ಮತ್ತು ಟಾಟಾ ಮೋಟಾರ್ಸ್ ಫೌಂಡೇಶನ್ ಸಹಿ ಹಾಕಿವೆ. ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಮಾಹಿತಿ ನೀಡಿರುವ ನೀತಿ ಆಯೋಗ, ಗ್ರಾಮಮಟ್ಟದ ಸಂಸ್ಥೆಗಳನ್ನು ಬಲಪಡಿಸುವುದು, ಸರ್ಕಾರಿ ಯೋಜನೆಗಳ ಸೌಲಭ್ಯವನ್ನು ಪರಿಣಾಮಕಾರಿಯಾಗಿ ತಲುಪಿಸುವುದು, ಕೃಷಿ ಮತ್ತು ಜೀವನೋಪಾಯ ವೃದ್ಧಿ, ಆರೋಗ್ಯ ಮತ್ತು ಪೌಷ್ಟಿಕತೆ ಉತ್ತೇಜನ, ಶಿಕ್ಷಣ ಹಾಗೂ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ಮತ್ತು ಸ್ವಸಹಾಯ ಗುಂಪುಗಳ ಮೂಲಕ ಮಹಿಳಾ ನೇತೃತ್ವದ ಜೀವನೋಪಾಯಕ್ಕೆ ಬೆಂಬಲ ನೀಡುವುದರ ಮೇಲೆ ಈ ಸಹಭಾಗಿತ್ವ ಕೇಂದ್ರೀಕರಿಸಲಿದೆ ಎಂದು ತಿಳಿಸಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**